ವಿಷಯ: ಹುಬ್ಬಳ್ಳಿ ಧಾರವಾಡ ಮಹಾ ನಗರದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ಕುರಿತು.

878 (1465)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ವಿಚಾರ ಈಗ ಯಾವ ಹಂತದಲ್ಲಿ ಇದೆ?

ಆ) ಸರ್ಕಾರದವರು ಆ ಕುರಿತು ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ಹಾಗೂ ಕೇಂದ್ರ ಸರ್ಕಾರಕ್ಕೆ ಈ ಬಗ್ಗೆ ಪ್ರಸ್ತಾಪ ಕಳುಹಿಸಲಾಗಿದೆಯೇ?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯ ಮಂತ್ರಿಗಳು):

ಅ) ರಾಜ್ಯ ಸರ್ಕಾರ ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಬಹಳ ಕಾಲದಿಂದಲೂ ಪ್ರಯತ್ನಿಸುತ್ತಿದೆ. ಈ ಸಂಬಂಧದಲ್ಲಿ ಉಚ್ಚ ನ್ಯಾಯಾಲಯದ ಅನುಮತಿಯ ಅಗತ್ಯ ಇದ್ದು ಅವರ ಅನುಮತಿ ಕೋರಿ ಮುಖ್ಯ ಮಂತ್ರಿಗಳು ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಿಗೆ ಹುಬ್ಬಳ್ಳಿ-ಧಾರವಾಡ ನಗರದಲ್ಲಿ ನ್ಯಾಯಪೀಠ ಸ್ಥಾಪಿಸಲು ಸ್ಥಳವನ್ನು ನೀಡಲು ಹಾಗೂ ನ್ಯಾಯಾಧೀಶರಿಗೆ ಅನೇಕ ಸೌಲಭ್ಯಗಳನ್ನು ಕಲ್ಪಿಸಲು ಸಿದ್ದರಿದ್ದೇವೆ ಎಂಬ ಅಂಶವನ್ನು ಅವರ ಗಮನಕ್ಕೆ ತಂದು ಅವರ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ. ಉಚ್ಚ ನ್ಯಾಯಾಲಯದ ಅನುಮೋದನೆ ದೊರತ ಕೂಡಲೇ ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ಆ) ಕೈಗೊಂಡ ಕ್ರಮಗಳ ಬಗ್ಗೆ ಅಂಶ (ಅ)ನಲ್ಲಿ ವಿವರಿಸಲಾಗಿದೆ. ಉಚ್ಚ ನ್ಯಾಯಾಲಯದ ಸಹಮತಿ ದೊರೆತ ನಂತರ ರಾಜ್ಯಪಾಲರ ಒಪ್ಪಿಗೆ ಪಡೆದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗುವುದು.

ವಿಷಯ: ಧಾರವಾಡ ಜಿಲ್ಲೆಯಲ್ಲಿ ಸೀಮೆಎಣ್ಣೆ ಕೂಪನ್‌ಗಳ ವಿತರಣೆ

879 (1467)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೀಮೆಎಣ್ಣೆ ಕೂಪನ್‌ಗಳನ್ನು ಪಡೆದುಕೊಳ್ಳಲಿಕ್ಕೆ ಫೋಟೋಗಳನ್ನು ಹಾಜರುಪಡಿಸುವುದು ಅವಶ್ಯ ಇಲ್ಲವೆಂದು ಕರ್ನಾಟಕ ಹೈಕೋರ್ಟ್‌ನಲ್ಲಿ ಆದೇಶವಾಗಿದ್ದರೂ ಸಹ ಧಾರವಾಡ ಜಿಲ್ಲೆಯಲ್ಲಿ ಫೋಟೋಗಳನ್ನು ಹಾಜರುಪಡಿಸುತ್ತಿರುವರು ಆದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಈ ತೊಂದರೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಜಿ.ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):

ಅ) ಭಾವಚಿತ್ರವಿರುವ ಪಡಿತರ ಚೀಟಿಯನ್ನು ರಾಜ್ಯದ ಪಟ್ಟಣ ಪ್ರದೇಶದಲ್ಲಿ 1988ರಿಂದ ಜಾರಿಗೆ ತರಲಾಗಿದೆ. ಈ ನಂತರ ಪಡಿತರ ಚೀಟಿದಾರರ ಭಾವಚಿತ್ರಗಳನ್ನು ಹೊಸದಾಗಿ ಪಡೆದಿರುವುದಿಲ್ಲ. ಪಡಿತರ ಚೀಟಿಗಳನ್ನು ಸರಿಪಡಿಸಲು (ಅಪ್‌ಡೇಟ್) ಹೊಸ ಭಾವಚಿತ್ರಗಳ ಅವಶ್ಯಕತೆ ಇರುತ್ತದೆ. ಆದ್ದರಿಂದ 1998ನೇ ವರ್ಷದಲ್ಲಿ ಕೂಪನ ವಿತರಣೆಯ ಮೊದಲು ಪಡಿತರ ಚೀಟಿಗಳನ್ನು ಪರಿಶೀಲಿಸಿ ಇತ್ತೀಚಿನ ಭಾವಚಿತ್ರಗಳನ್ನು ಪಡಿತರ ಚೀಟಿಗೆ ಅಂಟಿಸಿ ಪಡಿತರ ಚೀಟಿಗಳನ್ನು ಅಪಡೇಟ್ ಮಾಡುವ ಅವಶ್ಯಕತೆ ಇರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂ. 34439:97 ಮತ್ತು 34787:97ರಲ್ಲಿ ಪಡಿತರ ಚೀಟಿಗಳನ್ನು ಅಪ್‌ಡೇಟ್ ಮಾಡಲು ಭಾವಚಿತ್ರಗಳ ಅವಶ್ಯಕತೆ ಇದೆಯೆಂದು ಅಭಿಪ್ರಾಯ ಪಟ್ಟಿರುತ್ತದೆ. ಆದರೂ ಸಹ ಸೀಮೆಎಣ್ಣೆ ಕೂಪನ್‌ಗಳನ್ನು ವಿತರಣೆ ಮಾಡುವಾಗ ಭಾವಚಿತ್ರಗಳಿಗಾಗಿ ಒತ್ತಾಯಿಸುವ ಹಾಗಿಲ್ಲ. ಆದ್ದರಿಂದ, ಸೀಮೆಎಣ್ಣೆ ಕೂಪನ್ ವಿತರಣೆಗೆ ಭಾವ ಚಿತ್ರಗಳನ್ನು ಪಡೆಯಲಾಗುತ್ತಿದೆ ಎಂಬುದು ಸರಿಯಲ್ಲ. ಪಡಿತರ ಚೀಟಿಗಳನ್ನು ಅಪ್‌ಡೇಟ್ ಮಾಡಲು ಮಾತ್ರ ಭಾವಚಿತ್ರಗಳನ್ನು ಕೇಳಲಾಗುತ್ತಿದೆ. ಪಡಿತರ ಚೀಟಿದಾರರು ಪಡಿತರ ಪದಾರ್ಥಗಳನ್ನು ಪಡೆಯಲು ನ್ಯಾಯಬೆಲೆ ಅಂಗಡಿಗೆ ಹೋದಾಗ ಭಾವಚಿತ್ರಗಳನ್ನು ನ್ಯಾಯಬೆಲೆ ಅಂಗಡಿಯಲ್ಲಿ ಸಲ್ಲಿಸಬಹುದಾಗಿರುತ್ತದೆ. ಆದುದರಿಂದ ಪಡಿತರ ಚೀಟಿದಾರರಿಗೆ ತೊಂದರೆಯಾಗುವ ಸಂಭವವಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ವಿಷಯ: ಕಳ್ಳಂಬೆಳ್ಳ ಕ್ಷೇತ್ರದಲ್ಲಿ ಸಣ್ಣ ನೀರಾವರಿ ಯೋಜನೆಗಳು

881 (1256)

ಶ್ರೀ ಟಿ.ಬಿ.ಜಯಚಂದ್ರ (ಕಳ್ಳಂಬೆಳ್ಳ): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?